# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 67

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 11.08.2025

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | 2023 ಸೆಪ್ಟಂಬರ್ ರಿಂದ ಸಿಂಧನೂರು ವಿಧಾನಸಭಾ ಕ್ಷೇತ್ರದಲ್ಲಿ ಹೊಸ ಪಡಿತರ ಚೀಟಿಗಳನ್ನು ಇಲ್ಲಿಯವರೆಗೂ ವಿತರಿಸದಿರಲು ಕಾರಣವೇನು; | ಸೆಪ್ಟೆಂಬರ್ 2023 ಅಂತ್ಯದ ವರೆಗೆ ಸಲ್ಲಿಸಲಾಗಿದ್ದ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಸಿರುವ 295,986 ಅರ್ಜಿಗಳನ್ನು ವಿಲೇಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್ಎ 2021 ಬೆಂಗಳೂರು ದಿನಾಂಕ: 29.09.2023 ರಲ್ಲಿ ಆದೇಶಿಸಲಾಗಿರುತ್ತದೆ.<br>ಅದರಂತೆ ಸಿಂಧನೂರು ವಿಧಾನಸಭಾ ಕ್ಷೇತ್ರದಲ್ಲಿ 2023-24ನೇ ಸಾಲಿನಿಂದ ಈವರೆಗೂ 799 ಹೊಸ ಆದ್ಯತಾ ಪಡಿತರ ಚೀಟಿಗಳನ್ನು ಅನುಮೋದಿಸಿದ್ದು 181 ಅರ್ಜಿಗಳನ್ನು ತಿರಸ್ಕರಿದ್ದು, ಒಟ್ಟು 980 ಅರ್ಜಿಗಳನ್ನು ವಿಲೇಗೊಳಿಸಲಾಗಿರುತ್ತದೆ<br>ತುರ್ತು ವೈದ್ಯಕೀಯ ಪರಿಸ್ಥಿತಿ ಹಿನ್ನೆಲೆ ಇರುವ ಅರ್ಹರಿಗೆ ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ ಹಾಗೂ PVTG's ರಡಿ ಬರುವ ಬುಡಕಟ್ಟು ಸಮುದಾಯದವರಿಗೆ ಪಡಿತರ ಚೀಟಿಯನ್ನು ಕಾಲಕಾಲಕ್ಕೆ ವಿತರಿಸಲು ಕ್ರಮವಹಿಸಲಾಗುತ್ತಿದೆ. |
| ಆ | ಈ ಕ್ಷೇತ್ರದಲ್ಲಿ ಆರೋಗ್ಯದ ಸೌಲಭ್ಯ ಮತ್ತು ಸುರಕ್ಷತಾ ದೃಷ್ಟಿಯಿಂದ. ಹೊಸದಾಗಿ ಸಂಸಾರ ಹೂಡಿದ ಕುಟುಂಬಗಳಿಗೆ, ಮತ್ತು ವಿಭಕ್ತವಾಗಿರುವ ಅಣ್ಣ ತಮ್ಮಂದಿರು ಬೇರೆಯಾಗಿರುವ ಕುಟುಂಬಗಳಿಗೆ ಸುಮಾರು 2000 ಹೊಸ ಪಡಿತರ ಚೀಟಿಗಳನ್ನು ವಿತರಿಸದೆ ಬಾಕಿ ಇರುವುದು ನಿಜವೇ; | ಸಿಂಧನೂರು ವಿಧಾನಸಭಾ ಕ್ಷೇತ್ರದಲ್ಲಿ 2023-24ನೇ ಸಾಲಿನಿಂದ ಈವರೆಗೂ 799 ಹೊಸ ಆದ್ಯತಾ ಪಡಿತರ ಚೀಟಿಗಳನ್ನು ಅನುಮೋದಿಸಿದ್ದು 181 ಅರ್ಜಿಗಳನ್ನು ತಿರಸ್ಕರಿದ್ದು, ಒಟ್ಟು 980 ಅರ್ಜಿಗಳನ್ನು ವಿಲೇಗೊಳಿಸಲಾಗಿರುತ್ತದೆ. ತುರ್ತು ವೈದ್ಯಕೀಯ ಪರಿಸ್ಥಿತಿ ಹಿನ್ನೆಲೆ ಇರುವ ಅರ್ಹರಿಗೆ ಆದ್ಯತಾ ಪಡಿತರ ಚೀಟಿಯನ್ನು ನೀಡಲು ಕ್ರಮವಹಿಸಲಾಗುತ್ತದೆ. 2024 ರ ಅಕ್ಟೋಬರ್ ನಿಂದ ಈವರೆಗೂ 2914 ಅರ್ಜಿಗಳು ವಿಲೇವಾರಿಗೆ ಬಾಕಿ ಇರುತ್ತದೆ. |

| | | |
|---|---|---|
| ಇ | ಬಾಕಿ ಇರುವ ಹೊಸ ಪಡಿತರ ಚೀಟಿಗಳನ್ನು ಯಾವ ಕಾಲಮಿತಿಯೊಳಗೆ ವಿತರಿಸಲು ಕ್ರಮವಹಿಸಲಾಗುವುದು? | ಬಾಕಿ ಇರುವ ಅರ್ಜಿಗಳನ್ನು ಅರ್ಹತಾ ಮಾನದಂಡಗಳ ಆಧಾರದ ಮೇಲೆ ನಿಯಮಾನುಸಾರ ಪರಿಶೀಲಿಸಿ ಪಡಿತರ ಚೀಟಿಯನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ. |

ಇ- ಆನಾಸ 191 ಡಿಆರ್‌ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು